ಬಣ್ಣದ ಈ ಸೀರೆಗಳು ನವತರುಣಿಯರ, ಮಧ್ಯಮ ವಯೋಮಾನದವರ, ವೃದ್ಧರ ಅಚ್ಚುಮೆಚ್ಚಿನ ಆಯ್ಕೆಯಾಗುತ್ತಿವೆ. ಮಗ್ಗವನ್ನೇ ಜೀವನಾಧಾರ ಮಾಡಿಕೊಂಡಿರುವ ಕಾರ್ಮಿಕರ ಜೀವಚೈತನ್ಯಕ್ಕೆ ಟಾನಿಕ್‌ನ ಹಾಗೆ ಈ ಒಲವು ಇದ್ದರೂ ಇದು ಹೊಟ್ಟೆ ತುಂಬಿಸುವುದಿಲ್ಲ, ಆರ್ಥಿಕ ಸದೃಢತೆ ನೀಡುವುದಿಲ್ಲ. ಇದು 'ರಾಕ್ಷಸನ ಹೊಟ್ಟೆಗೆ ಅರೆ ಕಾಸಿನ ಮಜ್ಜಿಗೆಯಂತೆ' ಎನ್ನುವ ಹುಯಿಲು ಆಗಾಗ್ಗೆ ಕೇಳಿಬರುತ್ತದೆ. ಸರ್ಕಾರ ಕೈಮಗ್ಗದ ಕಾರ್ಮಿಕರಿಗೆ ಹಲವು ಯೋಜನೆಗಳನ್ನು ನೀಡುತ್ತಿದೆ. ಮಾರುಕಟ್ಟೆ ವ್ಯವಸ್ಥೆಯನ್ನು ಸುಧಾರಿಸುವ ಅಂಶಗಳನ್ನೂ ರೂಪಿಸುತ್ತಿದೆ.

ಮೈಸೂರು ರಾಜವಂಶದ ಶ್ರೀಕಂಠದತ್ತ ಒಡೆಯರ್ ಹಾಗೂ ಪ್ರಮೋದಾ ದೇವಿ ಅವರು ಮೈಸೂರ್ ಸಿಲ್ಕ್ ಸೀರೆಗಳ ಫ್ಯಾಷನ್ ಶೋ ಮಾಡಿ ಆ ಸೀರೆಗಳ ಜನಪ್ರಿಯತೆ ವಿಸ್ತರಿಸಿದ್ದನ್ನೂ ಸಹ ನಾವಿಲ್ಲಿ ನೆನಪಿಸಿಕೊಳ್ಳಬಹುದು! ಭಾರತದ ರಾಯಭಾರಿ ಕಚೇರಿಗಳಲ್ಲಿ, ಭಾರತಕ್ಕೆ ಭೇಟಿ ನೀಡುವ ವಿದೇಶಗಳ ಪ್ರಮುಖ ವ್ಯಕ್ತಿಗಳಿಗೆ ಮೈಸೂರ್ ಸಿಲ್ಕ್ ಸೀರೆಯ ಉಡುಗೊರೆ ನೀಡುವುದೂ ಒಂದು ರೂಢಿ. ಇದು ಕರ್ನಾಟಕ ರಾಜ್ಯದ ಕ್ಲಾಸಿಕಲ್ ಹಿರಿಮೆ!

ದಮಯಂತಿಯನ್ನು ಕಾಡಲ್ಲಿ ಬಿಟ್ಟುಹೋಗುವ ನಳನು ತನ್ನ ಮಾನ ರಕ್ಷಣೆಗೆ ಬಳಸಿಕೊಂಡದ್ದು, ದ್ರೌಪದಿಯ ಪ್ರಸಂಗ ಕುರುಕ್ಷೇತ್ರ ಯುದ್ಧದ ಭೀಕರತೆಗೆ ಒಂದು ನೆಪವಾದದ್ದು ನೆನಪಿಸಿಕೊಳ್ಳಿ. ಎರಡೂ ಪ್ರಸಂಗಗಳಲ್ಲಿ ಸೀರೆಯೇ ಸಮಾನಾಂಶ. 'ನಳಚರಿತೆ'ಗೆ ದಮಯಂತಿಯ ಅರ್ಧ ಹರಿದ ಸೀರೆ ಕಾರಣವಾದರೆ, ಮಹಾಭಾರತದಲ್ಲಿ ದುಶ್ಶಾಸನ ಸೆಳೆಯಲಾರದೆ ಸುಸ್ತಾದ ದ್ರೌಪದಿಯ ಅಕ್ಷಯವಸ್ತ್ರ ಸೀರೆಯು ಅಕ್ಷೋಹಿಣಿ ಸೈನ್ಯದ ಯುದ್ಧಕ್ಕೆ ಪ್ರಬಲ ಕಾರಣ ಎಂದು ಪ್ರತಿಪಾದಿಸಿ ಗೆಲ್ಲಬಹುದು.

ಮನೆಯಲ್ಲೇ ಸೀರೆ ವ್ಯಾಪಾರ ಮಾಡುವ ಎಷ್ಟೋ ಮಹಿಳೆಯರು ಆರ್ಥಿಕ ಸ್ವಾವಲಂಬನೆ ಗಳಿಸಿ ಮನೆ ನಿಭಾಯಿಸುತ್ತಿರುವುದು ಸುಳ್ಳಲ್ಲ. ಮಕ್ಕಳ ಫೀಸು, ಮನೆಯ ಸಾಲದ ಕಂತು, ತವರಿಗೆ ಒಂದು ಪಾಲು ಕಳಿಸುತ್ತಾ, ಒಂದಷ್ಟು ಇಡಿಗಂಟು ಉಳಿಸುತ್ತಾ ದೇಶದ ಆರ್ಥಿಕತೆಗೆ ತಮ್ಮ ಕೊಡುಗೆಯನ್ನು ನೀಡಿರುತ್ತಾರೆ. ನೇರ ಸೀರೆ ವ್ಯಾಪಾರ ಮಾಡದವರೂ ಸಹ ಸೆರಗಿಗೆ ಕುಚ್ಚು, ಅಂಚಿಗೆ ಫಾಲ್, ಝಿಗ್‌ಜ್ಯಾಗ್, ಕಸೂತಿ, ಕುಪ್ಪಸ ಹೊಲಿಯುವ ಇತರೆ ಸೀರೆ ಸಂಬಂಧಿ ಕೆಲಸಗಳನ್ನು ಮನೆಯಲ್ಲೇ ಮಾಡುತ್ತಾ ಸಣ್ಣಪುಟ್ಟ ಖರ್ಚಿಗೆ ಸಂಪಾದಿಸಿಕೊಳ್ಳುವವರಿದ್ದಾರೆ. ಇದು ಆರ್ಥಿಕ ಸ್ವಾವಲಂಬನೆಗೆ ಸೀರೆಯ ಕೊಡುಗೆ ಎಂದು ಸೀರೆಯನ್ನು ಪ್ರಶಂಸಿಸಬಹುದು. ಸೀರೆಗೆ ಜೊತೆಯಾಗುವ ಕುಪ್ಪಸದ ವೈವಿಧ್ಯವೇ ಬೇರೆ ಲೋಕ. ಸೀರೆಯ ಒಟ್ಟು ಬೆಲೆಗಿಂತಲೂ ಕುಪ್ಪಸದ ಹೊಲಿಗೆಯೇ ಐದಾರು ಪಟ್ಟು ಹೆಚ್ಚು ದುಬಾರಿಯಾಗಿರುತ್ತದೆ! ಕುಪ್ಪಸದ ಅಂದವೇ ಸೀರೆಗೆ ಮೆರುಗು ನೀಡುತ್ತದೆ. ಸೀರೆಯ ಸೆರಗಿನ ಚಿತ್ತಾರ, ಕುಚ್ಚಿನ ಅಲಂಕಾರಗಳೂ ಸೀರೆಯನ್ನು ಅಂದಗಾಣಿಸುವಲ್ಲಿ ಅಪಾರ ಕೊಡುಗೆಯನ್ನು ನೀಡುತ್ತವೆ. ಚಿನ್ನ–ಬೆಳ್ಳಿಯ ಎಳೆಗಳನ್ನು, ಮುತ್ತು–ರತ್ನ–ವಜ್ರ–ಪಚ್ಚೆ ಹರಳಿನ ಕುಸುರಿಯನ್ನು ಸೇರಿಸಿಕೊಂಡು ಬಹು ಲಕ್ಷ / ಕೋಟಿ ರೂಪಾಯಿಯಲ್ಲಿ ರೇಷ್ಮೆ ಸೀರೆಗಳು ತಯಾರಾಗುವುದುಂಟು. ಆಗಾಗ್ಗೆ ಇಂತಹ ಸೀರೆಗಳು ಸುದ್ದಿಗೆ ಗ್ರಾಸವಾಗಿ ವಿಶ್ವದ ಗಮನ ಸೆಳೆಯುತ್ತವೆ.

ಮಗ್ಗದವರ ಜೀವನ ಅಗ್ಗವಾಯ್ತು ಎನ್ನುವ ಕೊರಗಿನ ಕೂಗಿನ ನಡುವೆಯೂ ಕೈಮಗ್ಗದ ಸೀರೆಗಳ ಗ್ರಾಹಕರು ದೊಡ್ಡದೊಡ್ಡ ಮಂದಿಯೇ ಇರುತ್ತಾರೆ. ನಮ್ಮ ಮಹಿಳಾ ಸಂಸದರು, ಮಹಿಳಾ ಮಂತ್ರಿಗಳು, ಜನಪ್ರಿಯ ರಾಜಕೀಯ ನಾಯಕಿಯರು ಸೀರೆಗಳು ಚರ್ಚೆಯ ಮುನ್ನೆಲೆಗೆ ಬರುವುದುಂಟು. ಮಮತಾ ಬ್ಯಾನರ್ಜಿ, ಸೋನಿಯಾಗಾಂಧಿ, ಮನೇಕಾ ಗಾಂಧಿ, ನಿರ್ಮಲಾ ಸೀತಾರಾಮನ್, ಶೋಭಾ ಕರಂದ್ಲಾಜೆಯವರ ಸೀರೆಗಳಿಂದ ಆಕರ್ಷಿತರಾದವರೂ ಬಹಳ ಮಂದಿ ಇದ್ದಾರೆ. ಹೀಗಾಗಿ ಸೀರೆ ಸಾಮಾನ್ಯ ಮಹಿಳೆಯರ ಉಡುಗೆಯಾಗಿ ಉಳಿದಿಲ್ಲ. ಕಚೇರಿಯಲ್ಲಿ ಕಾರ್ಯನಿರ್ವಹಿಸುವ ಮಹಿಳಾ ನೌಕರರ ಮೆಚ್ಚಿನ ಆಯ್ಕೆಯೂ ಸೀರೆಯೇ.

ಹೆಂಗಸರ ಬಟ್ಟೆಯೆಂದೇ ಜನಪ್ರಿಯವಾಗಿರುವ ಸೀರೆ ಹೆಂಗಸರ ಗೌರವದ ಧಿರಿಸಾಗಿರುವಂತೆ, ಮಾದಕ ಉಡುಪೂ ಆಗಿರುವುದುಂಟು. ನಾಯಕಿಯರ ಸೌಂದರ್ಯವನ್ನು ತೆರೆಯ ಮೇಲೆ ತೋರಿಸಲು ನಿರ್ದೇಶಕರು ಸೀರೆಗೇ ಪ್ರಥಮ ಆದ್ಯತೆ ನೀಡುತ್ತಾರೆ. ಆದರೆ, ಸೀರೆಯನ್ನು ಮೊದಲ ಬಾರಿಗೆ ಉಟ್ಟವರು ಅದನ್ನು ನಿಭಾಯಿಸಿಕೊಂಡು ತೊಡರುಗಾಲು ಇಡುತ್ತಾ ನಡೆದಾಡುತ್ತಾ ಕಾಲ ತಳ್ಳುವುದನ್ನು ನೋಡಿದರೆ ನಗೆ ಉಕ್ಕದಿರುವುದೇ? ಹತ್ತಾರು ಸೇಫ್ಟಿ ಪಿನ್ನುಗಳನ್ನು ಚುಚ್ಚಿಕೊಂಡರೂ ಎಲ್ಲಿ ಕಳಚುವುದೋ ಎಂಬ ಗಾಬರಿಯ ಹೊಸ ಹುಡುಗಿಯರ, ಯಾವುದೇ ಪಿನ್ನುಗಳನ್ನು ಹಾಕದೇ ಸೀರೆ ನಿಭಾಯಿಸುವಷ್ಟು ಪ್ರವೀಣರಾಗುವುದು ಸೀರೆಯ ಗೆಲುವು. 'ಪುಣ್ಯಕ್ಕೆ ಸೀರೆ ಕೊಟ್ಟರೆ ಹನ್ನೆರಡೇ ಮೊಳ' ಎಂದು ಕೊಂಕು ಆಡುವವರ ಬಾಯಿ ಮುಚ್ಚಿಸಲಾದೀತೆ? ಕುಪ್ಪಸ ಜೊತೆಯಾಗಿ ಬರುವ ಸೀರೆಗಳು, ಕಾಂಟ್ರಾಸ್ಟ್ ಕುಪ್ಪಸ ಹೊಲಿಸುವ ಸೀರೆಗಳು ನಾನಾ ವಿಧಗಳಿವೆ. ಉದ್ದ, ಗಿಡ್ಡ, ಮಧ್ಯಮ ಎತ್ತರದವರಿಗೆಲ್ಲಾ ಸೀರೆಯೇ ಸೂಕ್ತವಾಗಿ ಒಪ್ಪುವ ಉಡುಗೆ ಎನ್ನುವುದು ಸಾರ್ವಕಾಲಿಕ ಸತ್ಯ.

ಸೀರೆ ಉಡಿಸುವುದೊಂದು ಕಲೆ. ಸೀರೆ ಉಡಿಸುವುದನ್ನೇ ಉದ್ಯೋಗ ಮಾಡಿಕೊಂಡಿರುವ ಬಹಳ ಜನರಿದ್ದಾರೆ. ಮದುವೆ ಹೆಣ್ಣಿಗೆ ಸೀರೆ ಉಡಿಸಲು ಬರುವವರು ಹೆಣ್ಣಿನ ಅಮ್ಮ, ಅಕ್ಕ, ತಂಗಿ, ನಾದಿನಿ, ಅತ್ತೆ, ಅತ್ತಿಗೆಯರಿಗೂ ಸೀರೆ ಉಡಿಸಲೇಬೇಕೆನ್ನುವುದು ಅಲಿಖಿತ ಅಗ್ರಿಮೆಂಟು. ಚಿಕ್ಕ ಹುಡುಗಿಯರಿಗೆ ಸೀರೆ ಉಡಿಸುವುದು ಒಂದು ಸಮಸ್ಯೆಯೇ ಸೀರೆ ಉದುರಿಹೋಗುವ ಭೀತಿ ಅವರಿಗೆ! ಹೇಗೋ ಕಷ್ಟಪಟ್ಟು ಉಟ್ಟರೂ ಕಳಚಿಟ್ಟ ಮೇಲೆಯೇ ಉಸ್ಸೆಂದು ನಿಟ್ಟುಸಿರುಬಿಡುತ್ತಾರೆ. ಮರುಕ್ಷಣವೇ ಮತ್ತೆ ಯಾವಾಗ ಸೀರೆ ಉಟ್ಟೇನೆಂದು ಕನವರಿಸುತ್ತಾರೆ! ಹುಡುಗರಂತೂ ತಾವು ಪ್ರೇಮಿಸುವ ಹುಡುಗಿ ಸೀರೆ ಉಟ್ಟು ಬರಲಿ ಎಂದು ಪರಿತಪಿಸುತ್ತಾರೆ ಎಂದು ಸಿನಿಮಾಗಳಲ್ಲಿ ಹಲವು ಬಾರಿ ತೋರಿಸಿ ಅದೇ ನಿಜವಿರಬಹುದೆನಿಸುತ್ತದೆ. 'ದೂರದ ಊರಿಂದ ಹಮ್ಮೀರ ಬಂದ, ಜರತಾರಿ ಸೀರೆ ತಂದ...', 'ಹೆಣ್ಣಿಗೇ ಸೀರೆ ಏಕೆ ಅಂದ..!', 'ಸೀರೇಲಿ ಹುಡುಗಿಯ ನೋಡಲೆ ಬಾರದು...', 'ಮೊಳಕಾಲ್ ಸೀರೆ ಉಟ್ಕೊಂಡು' ಉಫ್..! ಪಟ್ಟಿ ಬೆಳೆಯುತ್ತದೆ ಹೊರತು ಮುಗಿಯುವುದಿಲ್ಲ.

ಸೀರೆ ಖರೀದಿಯು ಗಂಡಸರ ಜೇಬಿಗೆ ಕತ್ತರಿ ಹಾಕುತ್ತದೆ ಎಂದು ಕೊಂಕು ನುಡಿಯುವವರಿಗೇನು ಗೊತ್ತು? ಹಲವು ಕಂತುಗಳಲ್ಲಿ ಹಣಕೊಟ್ಟು ಖರೀದಿಸುವ ದುಬಾರಿ ಬೆಲೆಯ ಸೀರೆಗಳು ಜೇಬಿಗೆ ಕತ್ತರಿ ಹಾಕದೆ, ಜೇಬಿನ ಭಾರ ಕಡಿಮೆ ಮಾಡುತ್ತಾ ಮಹಿಳೆಯರ ಸಂಭ್ರಮವನ್ನು ಹೆಚ್ಚಿಸುತ್ತವೆ ಎಂದು! ಸೀರೆಗಳನ್ನು ಅರಿಶಿನ ಕುಂಕುಮಕ್ಕೆ, ಹಬ್ಬಗಳಲ್ಲಿ, ವಿವಿಧ ಮಂಗಳ ಕಾರ್ಯಗಳಲ್ಲಿ ಉಡುಗೊರೆಯಾಗಿ ನೀಡುವಂತೆಯೇ, ನಮ್ಮ ಹಳ್ಳಿಗಳ ಕಡೆ ಗಂಡನನ್ನು ಕಳೆದುಕೊಂಡ ವಿಧವೆಯರಿಗೆ ನೀಡುವ ಪದ್ಧತಿ ಉಂಟು. ಬಹುಶಃ, ಹಿಂದಿನ ಕಾಲಗಳಲ್ಲಿ ಮನೆಯ ದುಡಿಮೆಯ ಆಸರೆ ಗಂಡ ಮಾತ್ರವಾಗಿದ್ದು, ಆತನ ಸಾವಿನ ಅನಂತರ ಹೆಂಡತಿಯ ಪರಿಸ್ಥಿತಿ ಮೂರಾಬಟ್ಟೆಯಾಗದಿರಲಿ ಎಂದು ಯಾರೋ ಅಂತಃಕರಣ ಉಳ್ಳವರು ಇದನ್ನು ಜಾರಿಗೆ ತಂದಿರಬಹುದು.

ಗೋಪಿಕಾ ಸ್ತ್ರೀಯರ ಸೀರೆ ಕದ್ದು ಕಳ್ಳನೆನಿಸಿದರೂ ದ್ರೌಪದಿಯ ಆಪತ್ತಿನಲ್ಲಿ ಮಾನ ಕಾಯ್ದು ಕೃಷ್ಣ ಪರಮಾತ್ಮನೆನಿಸಿದ್ದೂ ಸಹ ಸೀರೆಯಿಂದಲೇ ಎಂದು ನಾವು ನಾರೀಮಣಿಯರು ಸೆರಗನ್ನು ಹಾರಿಸಬಹುದು (ಕಾಲರನ್ನ ಏರಿಸಿದಂತೆ!.) ಇನ್ನು 'ಸೆರಗನ್ನು ಹಾಸು' ಎಂಬ

